ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 78 ಹೈಕಕೋ 2014

ಕರ್ನಾಟಕ ಸರ್ಕಾರ ಸಚಿವಾಲಯ,
ವಿಧಾನ ಸೌಧ,
ಬೆಂಗಳೂರು, ದಿನಾಂಕ: 09.09.2015

**ತಿದ್ದೋಲೆ**

ವಿಷಯ: ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದ್ರಾಬಾದ್-ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ಆದೇಶ, 2013 ಹಾಗೂ ಅದರಡಿಯಲ್ಲಿ ಹೊರಡಿಸಲಾದ ನಿಯಮಗಳಲ್ಲಿನ ವಿವಿಧ ಕಂಡಿಕೆ/ಉಪಬಂಧಗಳ ಸ್ಪಷ್ಟೀಕರಣದ ಬಗ್ಗೆ.

ಉಲ್ಲೇಖ: ಇದೇ ಸಮ ಸಂಖ್ಯೆಯ ದಿನಾಂಕ 22.05.2015ರ ಸುತ್ತೋಲೆ.

******

ದಿನಾಂಕ 22.05.2015ರಂದು ಹೊರಡಿಸಲಾದ ಸುತ್ತೋಲೆಯ 4ನೇ ಸ್ಪಷ್ಟೀಕರಣದ 7ನೇ ಕಂಡಿಕೆಯಲ್ಲಿನ ಪಠ್ಯವನ್ನು ಮುಂದುವರೆಸಿ, ಈ ಕೆಳಕಂಡಂತೆ ಸೇರಿಸಿ, ಓದಿಕೊಳ್ಳತಕ್ಕದ್ದು:

"**ಅರ್ಹತಾ ಪ್ರಮಾಣ ಪತ್ರ ಅರ್ಹ ಸ್ಥಳೀಯ ವ್ಯಕ್ತಿಗಳಿಗೆ ಸಾರ್ವಜನಿಕ ಉದ್ಯೋಗ ಆದೇಶದಡಿಯಲ್ಲಿ ಮೀಸಲಾತಿಗೊಳಪಡುವ ಹುದ್ದೆಗಳಿಗೆದುರು ಪರಿಗಣಿಸಲು ಅನುವಾಗುವಂತೆ ನೀಡಲಾಗುವ ದಾಖಲಾತಿಯಾಗಿರುತ್ತದೆ. ಅರ್ಹ ಸ್ಥಳೀಯ ವ್ಯಕ್ತಿಗಳು ಸ್ಥಳೀಯ ವೃಂದದಲ್ಲಿ ಲಭ್ಯವಿರುವ ಹುದ್ದೆಗಳಿಗೆದುರಾಗಿ ಮೀಸಲಾತಿ ಕೋರಿ ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಒಂದು ಸ್ವಯಂ ಘೋಷಿತ ಪ್ರಮಾಣ ಪತ್ರ ನೀಡುವುದು.** ತಾತ್ಕಾಲಿಕವಾಗಿ ಆಯ್ಕೆಗೊಂಡ ಅಭ್ಯರ್ಥಿಗಳು ದಾಖಲಾತಿಯ ಪರಿಶೀಲನೆಯ ಸಮಯದಲ್ಲಿ ಸಕ್ಷಮ ಪ್ರಾಧಿಕಾರದಿಂದ ನೀಡಲಾದ ಅರ್ಹತಾ ಪ್ರಮಾಣ ಪತ್ರ ನೀಡತಕ್ಕದ್ದು. ಅರ್ಹತಾ ಪ್ರಮಾಣ ಪತ್ರದಲ್ಲಿ ಸಕ್ಷಮ ಪ್ರಾಧಿಕಾರಿಗಳು ಅರ್ಜಿ ಸಲ್ಲಿಸಲು ನಿಗಧಿಪಡಿಸಲಾದ ಅಂತಿಮ ದಿನಾಂಕದಂದು ಅಭ್ಯರ್ಥಿಯು ಸಾರ್ವಜನಿಕ ಉದ್ಯೋಗ ಆದೇಶದಂತೆ ಸ್ಥಳೀಯ ವ್ಯಕ್ತಿಯೆಂದು ಅರ್ಹತೆ ಪಡೆದಿರುತ್ತಾನೆಂದು ಒಂದು ಅಡಿ ಟಿಪ್ಪಣಿಯನ್ನು ದಾಖಲಿಸುವುದು."

Ulleuthe 09.09.2015
(ಕೆ.ಎಲ್. ಲೋಕನಾಥ)
ಸರ್ಕಾರದ ಜಂಟಿ ಕಾರ್ಯದರ್ಶಿ
(ಹೈದ್ರಾಬಾದ್-ಕರ್ನಾಟಕ ವಿಶೇಷ ಕೋಶ)
ಸಿಆಸುಇ

ಪ್ರತಿ:

1. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು
2. ಎಲ್ಲಾ ಇಲಾಖಾ ಮುಖ್ಯಸ್ಥರು.
3. ಪ್ರಾದೇಶಿಕ ಆಯುಕ್ತರು, ಕಲಬುರಗಿ ವಿಭಾಗ, ಕಲಬುರಗಿ.
4. ಕಾರ್ಯದರ್ಶಿಗಳು, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು.
5. ಆಡಳಿತಾಧಿಕಾರಿಗಳು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, 18ನೇ ಅಡ್ಡರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು.
6. ಶಿಕ್ಷಣ ಇಲಾಖೆಯ ಹೆಚ್ಚುವರಿ ಆಯುಕ್ತರು, ಕಲಬುರಗಿ ವಿಭಾಗ, ಕಲಬುರಗಿ.
7. ಜಿಲ್ಲಾಧಿಕಾರಿಗಳು, ಕಲಬುರಗಿ/ರಾಯಚೂರು/ಕೊಪ್ಪಳ/ಯಾದಗಿರಿ/ಬಳ್ಳಾರಿ/ಬೀದರ್ ಜಿಲ್ಲೆ.
8. ಮುಖ್ಯ ಕಾರ್ಯ ನಿರ್ವಾಹಣಾಧಿಕಾರಿಗಳು, ಕಲಬುರಗಿ/ರಾಯಚೂರು/ಕೊಪ್ಪಳ/ಯಾದಗಿರಿ/ಬಳ್ಳಾರಿ/ಬೀದರ್ ಜಿಲ್ಲೆ.
9. ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರು, ಕಲಬುರಗಿ/ರಾಯಚೂರು/ಕೊಪ್ಪಳ/ಯಾದಗಿರಿ/ಬಳ್ಳಾರಿ/ ಬೀದರ್ ಜಿಲ್ಲೆ.
10. ಹೈದ್ರಾಬಾದ್-ಕರ್ನಾಟಕ ಪ್ರದೇಶದ ಎಲ್ಲಾ ಸಹಾಯಕ ಆಯುಕ್ತರು.
11. ಎಲ್ಲಾ ವಿಶ್ವವಿದ್ಯಾನಿಲಯಗಳ ಕುಲಸಚಿವರುಗಳು.
12. ಹೆಚ್ಚುವರಿ ಪ್ರತಿ / ಶಾಖಾ ರಕ್ಷಾ ಕಡತ.